1586ಮುಕ್ತ

107

4KK 01/04/1

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಸುನೀಲ್ ಯ ವಲ್ಯಾಪುರೆ ರವರ 330ನೇ ನಿಯಮದ ಸೂಚನೆಗೆ ಉತ್ತರ.**

**ಪ್ರಶ್ನೆ:**

ರಾಜ್ಯ ಸರ್ಕಾರವೂ 2024-25 ನೇ ಸಾಲಿನ ಬಜೆಟ್ ಅಧಿವೇಶನದಲ್ಲಿ ಮಂಡನೆ ಮಾಡುವಾಗ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ 5 ಕೋಟಿ ರೂಪಾಯಿ ಮೀಸಲು ಇಡುವುದರ ಮುಖಾಂತರ ಶ್ರೀ ಸಿದ್ದರಾಮೇಶ್ವರ ಅಧ್ಯಯನ ಪೀಠ ಅನುಷ್ಠಾನ ಮಾಡುವ ತಯಾರಿಯ ಹೊಣೆಯನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ನೀಡಲಾಗಿತ್ತು, ಸದರಿ ವಿಷಯದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಿರ್ದೇಶಕರ ಮುಖಾಂತರ ಮಹಿಳಾ ವಿಶ್ವ ವಿದ್ಯಾಲಯ ವಿಜಯಪುರಕ್ಕೆ ಭೂಮಿ, ಸಿಬ್ಬಂದಿ ಹಾಗೂ ಅನುಷ್ಠಾನಕ್ಕೆ ತಗಲುವ ವೆಚ್ಚದ ನಕಾಶೆ ಸಿದ್ಧಪಡಿಸಿ ನೀಡಲು ಪತ್ರ ಬರೆಯಲಾಗಿತ್ತು, ತದನಂತರ ಯಾವುದೇ ಬೆಳವಣಿಗೆ ಕಾಣದೇ ಇರುವುದು ಭೋವಿ ಸಮಾಜ ಮತ್ತು ಇನ್ನಿತರ ಸಮಾಜದವರಿಗೆ ನಿರಾಶೆಯಂತಾಗಿದೆ. ಈ ವಿಷಯದ ಕುರಿತು ನಿಯಮ 330ರ ಅಡಿಯಲ್ಲಿ ಸದನದಲ್ಲಿ ಚರ್ಚಿಸಲು ಅವಕಾಶ ನೀಡಬೇಕೆಂದು ಕೋರುತ್ತೇನೆ.

**ಉತ್ತರ:**

2024-25ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ-358ರಲ್ಲಿ "ತತ್ವಪದಕಾರರು ಮತ್ತು ಸೂಫಿಗಳ ಬದುಕು ಮತ್ತು ಸಂದೇಶಗಳ ಅಧ್ಯಯನ ಕೈಗೊಳ್ಳಲು ಕಲಬುರಗಿ ವಿಶ್ವವಿದ್ಯಾಲಯದಲ್ಲಿ ಮತ್ತು ಶಿವಯೋಗಿ ಸಿದ್ದರಾಮೇಶ್ವರರವರ ಬದುಕು-ಬರಹ ಕುರಿತು ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದಲ್ಲಿ ಅಧ್ಯಯನ ಪೀಠಗಳನ್ನು ಸ್ಥಾಪಿಸಲಾಗುವುದು" ಎಂದು ಘೋಷಿಸಲಾಗಿರುತ್ತದೆ

ಸರ್ಕಾರದ ಆದೇಶ ಸಂಖ್ಯೆ ಕಸಂವಾ 216 ಕಸಧ 2024(ಭಾಗ-1), ದಿನಾಂಕ:03-07-2024ರಲ್ಲಿ ತತ್ವಪದಕಾರರು ಮತ್ತು ಸೂಫಿಗಳ ಬದುಕು ಮತ್ತು ಸಂದೇಶಗಳ ಅಧ್ಯಯನ ಕೈಗೊಳ್ಳಲು ಕಲಬುರಗಿ ವಿಶ್ವವಿದ್ಯಾಲಯದಲ್ಲಿ ಮತ್ತು ಶ್ರೀ ಶಿವಯೋಗಿ ಸಿದ್ದರಾಮೇಶ್ವರರವರ ಬದುಕು-ಬರಹ ಕುರಿತು ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದಲ್ಲಿ ಅಧ್ಯಯನ ಪೀಠಗಳನ್ನು ಸ್ಥಾಪಿಸಲು ತಾತ್ವಿಕ ಅನುಮೋದನ ನೀಡಿ ಆದೇಶಿಸಲಾಗಿರುತ್ತದೆ.

ಸರ್ಕಾರದ ಆದೇಶ ಸಂಖ್ಯೆ: ಕಸಂವಾ 216 ಕಸಧ 2024 ದಿನಾಂಕ:28.10.2024ರಲ್ಲಿ ಆಯವ್ಯಯ ಭಾಷಣದ ಕಂಡಿಕೆ-358ರಲ್ಲಿ ತತ್ವಪದಕಾರರು ಮತ್ತು ಸೂಫಿಗಳ ಬದುಕು ಮತ್ತು ಸಂದೇಶಗಳ ಅಧ್ಯಯನ ಕೈಗೊಳ್ಳುವ ಕಲಬುರಗಿ ವಿಶ್ವವಿದ್ಯಾಲಯದಲ್ಲಿ ಮತ್ತು ಶ್ರೀ ಶಿವಯೋಗಿ ಸಿದ್ದರಾಮೇಶ್ವರರವರ ಬದುಕು-ಬರಹ ಕುರಿತು ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದಲ್ಲಿ ಅಧ್ಯಯನ ಪೀಠಗಳನ್ನು ಸ್ಥಾಪಿಸಲು 2024-25ರ ಆಯವ್ಯಯ ಲೆಕ್ಕಶೀರ್ಷಿಕೆ:2205-00-102-4-31 ಕನ್ನಡ ಮತ್ತು ಸಂಸ್ಕೃತಿಗೆ ಪ್ರೋತ್ಸಾಹ 059-ಇತರೆ ಖರ್ಚುಗಳಡಿ ಕಾಯ್ದಿರಿಸಿರುವ ರೂ.200.00 ಲಕ್ಷಗಳಿಂದ ಈ ಎರಡು ಅಧ್ಯಯನ ಪೀಠಗಳ ಸ್ಥಾಪನೆಗೆ ತಲಾ ರೂ.100.00 ಲಕ್ಷಗಳನ್ನು; ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ ಹಾಗೂ ಗುಲಬರ್ಗಾ ವಿಶ್ವವಿದ್ಯಾಲಯ ಕಲಬುರಗಿ ಇವರಿಗೆ ಬಿಡುಗಡೆ ಮಾಡಲು ಸರ್ಕಾರವು ಮಂಜೂರಾತಿ ನೀಡಿ ಆದೇಶಿಸಲಾಗಿರುತ್ತದೆ ಹಾಗೂ ಸದರಿ ಆದೇಶದ (2)ನೇ ಷರತ್ತಿನಲ್ಲಿ ಸಂಸ್ಥೆಯು ಸಲ್ಲಿಸುವ ದಾಖಲೆಗಳನ್ವಯ ಸಮಂಜಸವಾಗಿರುವ ದರದಲ್ಲಿ ಸೇವೆ/ಸರಕುಗಳನ್ನು ಖರೀದಿಸಿರುವ ಬಗ್ಗೆ ಮಾಹಿತಿ ಆಧರಿಸಿ ಅನುದಾನ ಬಿಡುಗಡೆ ಮಾಡುವುದು ಎಂಬ ಷರತ್ತನ್ನು ವಿಧಿಸಲಾಗಿರುತ್ತದೆ. ವಿವರವನ್ನು ಅನುಬಂಧದಲ್ಲಿರಿಸಿದೆ.

ತತ್ವಪದಕಾರರು ಮತ್ತು ಸೂಫಿಗಳ ಬದುಕು ಮತ್ತು ಸಂದೇಶಗಳ ಅಧ್ಯಯನ ಕೈಗೊಳ್ಳಲು ಕಲಬುರಗಿ ವಿಶ್ವವಿದ್ಯಾಲಯದಲ್ಲಿ ಅಧ್ಯಯನ ಪೀಠ ಸ್ಥಾಪಿಸಲು ಮತ್ತು ಶ್ರೀ ಶಿವಯೋಗಿ ಸಿದ್ದರಾಮೇಶ್ವರರವರ ಬದುಕು-ಬರಹ ಕುರಿತು, ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದಲ್ಲಿ ಅಧ್ಯಯನ ಪೀಠಗಳನ್ನು ಸ್ಥಾಪಿಸಲು ಅನುದಾನ ಬಿಡುಗಡೆ ಮಾಡಲು ಅನುಕೂಲವಾಗುವಂತೆ ಸರ್ಕಾರದ ಆದೇಶ ಸಂಖ್ಯೆ: ಕಸಂವಾ 216 ಕಸಧ 2024 ದಿನಾಂಕ:28.10.2024ರ ಆದೇಶದ 2ನೇ ಷರತ್ತನ್ನು ಕೈಬಿಡುವ ಪ್ರಸ್ತಾವನೆಯು ಪರಿಶೀಲನೆಯಲ್ಲಿರುತ್ತದೆ.

ಸಂಖ್ಯೆ: ಕಸಂವಾ 57 ಕಸನಿ 2026

**(ಶಿವರಾಜ.ಎಸ್.ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು.

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2024-25ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ:358:ತತ್ವಪದಕಾರರು ಮತ್ತು ಸೂಫಿಗಳ ಬದುಕು ಮತ್ತು ಸಂದೇಶಗಳ ಅಧ್ಯಯನ ಕೈಗೊಳ್ಳಲು ಕಲಬುರಗಿ ವಿಶ್ವವಿದ್ಯಾಲಯದಲ್ಲಿ ಮತ್ತು ಶಿವಯೋಗಿ ಸಿದ್ದರಾಮೇಶ್ವರರವರ ಬದುಕು-ಬರಹ ಕುರಿತು ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದಲ್ಲಿ ಅಧ್ಯಯನ ಪೀಠಗಳನ್ನು ಸ್ಥಾಪಿಸಲು ಅನುದಾನ ಮಂಜೂರು ಮಾಡುವ ಕುರಿತು.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ:ಕಸಂವಾ 216 ಕಸಧ 2024(ಭಾಗ-1), ದಿನಾಂಕ:03-07-2024.
2. ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಏಕಕಡತ ಸಂಖ್ಯೆ:ಡಿಕೆಸಿ-12030/13/2024(1501104).
3. ಆರ್ಥಿಕ ಇಲಾಖೆಯ ಹಿಂಬರಹ ಸಂಖ್ಯೆ:ಆಇ 532/ವೆಚ್ಚ-7/2024, ದಿನಾಂಕ:23.09.2024.

**********

**ಪ್ರಸ್ತಾವನೆ:-**

ಮೇಲೆ ಓದಲಾದ (1)ರ ಆದೇಶದಲ್ಲಿ, 2024-25ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ:358ರಲ್ಲಿ ತತ್ವಪದಕಾರರು ಮತ್ತು ಸೂಫಿಗಳ ಬದುಕು ಮತ್ತು ಸಂದೇಶಗಳ ಅಧ್ಯಯನ ಕೈಗೊಳ್ಳಲು ಕಲಬುರಗಿ ವಿಶ್ವವಿದ್ಯಾಲಯದಲ್ಲಿ ಮತ್ತು ಶಿವಯೋಗಿ ಸಿದ್ದರಾಮೇಶ್ವರರವರ ಬದುಕು-ಬರಹ ಕುರಿತು ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದಲ್ಲಿ ಅಧ್ಯಯನ ಪೀಠಗಳನ್ನು ಸ್ಥಾಪಿಸಲು ತಾತ್ವಿಕ ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ (2)ರ ಏಕಕಡತದಲ್ಲಿ, 2024-25ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-358ನ್ನು ಅನುಷ್ಠಾನಗೊಳಿಸಲು ಅನುಕೂಲವಾಗುವಂತೆ, ವಿಜಯಪುರದಲ್ಲಿರುವ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದಲ್ಲಿ ಶ್ರೀ ಶಿವಯೋಗಿ ಸಿದ್ದರಾಮೇಶ್ವರ ರವರ ಅಧ್ಯಯನ ಪೀಠ ಸ್ಥಾಪನೆಗೆ ರೂ.5.00ಕೋಟಿ ಹಾಗೂ ಗುಲಬರ್ಗಾ ವಿಶ್ವವಿದ್ಯಾಲಯದಲ್ಲಿ ತತ್ವಪದಕಾರರು ಮತ್ತು ಸೂಫಿಗಳ ಬದುಕು ಮತ್ತು ಸಂದೇಶಗಳ ಅಧ್ಯಯನ ಪೀಠ ಸ್ಥಾಪನೆಗೆ ರೂ.8.00 ಕೋಟಿ, ಒಟ್ಟಾರೆ ರೂ.13.00 ಕೋಟಿಗಳನ್ನು 2024-25ನೇ ಸಾಲಿನ ಲೆಕ್ಕಶೀರ್ಷಿಕೆ:2205-00-102-4-31-059ರಡಿ ಹೆಚ್ಚುವರಿ ಅನುದಾನ ಒದಗಿಸಿ ಬಿಡುಗಡೆ ಮಾಡುವಂತೆ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರು ಕೋರಿರುತ್ತಾರೆ.

ಮೇಲೆ ಓದಲಾದ (3)ರ ಆರ್ಥಿಕ ಇಲಾಖೆಯ ಹಿಂಬರಹದಲ್ಲಿ, ಆಯವ್ಯಯ ಭಾಷಣದ ಕಂಡಿಕೆ-358ರಲ್ಲಿನ "ತತ್ವಪದಕಾರರು ಮತ್ತು ಸೂಫಿಗಳ ಬದುಕು ಮತ್ತು ಸಂದೇಶಗಳ ಅಧ್ಯಯನ ಕೈಗೊಳ್ಳಲು ಕಲಬುರಗಿ ವಿಶ್ವವಿದ್ಯಾಲಯದಲ್ಲಿ ಮತ್ತು ಶ್ರೀ ಶಿವಯೋಗಿ ಸಿದ್ದರಾಮೇಶ್ವರರವರ ಬದುಕು-ಬರಹ ಕುರಿತು ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದಲ್ಲಿ ಅಧ್ಯಯನ ಪೀಠಗಳನ್ನು ಸ್ಥಾಪಿಸಲಾಗುವುದು" ಎಂಬ ಘೋಷಣೆಯನ್ನು ಅನುಷ್ಠಾನಗೊಳಿಸಲು 2024-25ರ ಆಯವ್ಯಯ ಲೆಕ್ಕಶೀರ್ಷಿಕೆ:2205-00-102-4-31 ಕನ್ನಡ ಮತ್ತು ಸಂಸ್ಕೃತಿಗೆ ಪ್ರೋತ್ಸಾಹ 059-ಇತರ ಖರ್ಚುಗಳಡಿ ಕಾಯ್ದಿರಿಸಿರುವ ರೂ.200.00 ಲಕ್ಷಗಳಿಂದ ಈ ಎರಡು ಅಧ್ಯಯವ ಪೀಠಗಳ ಸ್ಥಾಪನೆಗೆ ತಲಾ ರೂ.100.00 ಲಕ್ಷಗಳನ್ನು ಬಳಸಿಕೊಳ್ಳಲು ಸಹಮತಿ ನೀಡಿರುತ್ತದೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

### ಸರ್ಕಾರದ ಆದೇಶ ಸಂಖ್ಯೆ:ಕಸಂವಾ 216 ಕಸಧ 2024, ಬೆಂಗಳೂರು, ದಿನಾಂಕ:28-10-2024.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಆಯವ್ಯಯ ಭಾಷಣದ ಕಂಡಿಕೆ-358ರಲ್ಲಿನ "ತತ್ವಪದಕಾರರು ಮತ್ತು ಸೂಫಿಗಳ ಬದುಕು ಮತ್ತು ಸಂದೇಶಗಳ ಅಧ್ಯಯನ ಕೈಗೊಳ್ಳಲು ಕಲಬುರಗಿ ವಿಶ್ವವಿದ್ಯಾಲಯದಲ್ಲಿ ಮತ್ತು ಶ್ರೀ ಶಿವಯೋಗಿ ಸಿದ್ದರಾಮೇಶ್ವರರವರ ಬದುಕು-ಬರಹ ಕುರಿತು ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದಲ್ಲಿ ಅಧ್ಯಯನ

ಪೀಠಗಳನ್ನು ಸ್ಥಾಪಿಸಲು 2024-25ರ ಆಯವ್ಯಯ ಲೆಕ್ಕಶೀರ್ಷಿಕೆ:2205-00-102-4-31 ಕನ್ನಡ ಮತ್ತು ಸಂಸ್ಕೃತಿಗೆ ಪ್ರೋತ್ಸಾಹ 059- ಇತರೆ ಖರ್ಚುಗಳಡಿ ಕಾಯ್ದಿರಿಸಿರುವ ರೂ.200.00 ಲಕ್ಷಗಳಿಂದ ಈ ಎರಡು ಅಧ್ಯಯನ ಪೀಠಗಳ ಸ್ಥಾಪನೆಗೆ ತಲಾ ರೂ.100.00 ಲಕ್ಷ(ಒಂದುನೂರು ಲಕ್ಷ ರೂಪಾಯಿಗಳು ಮಾತ್ರ)ಗಳನ್ನು ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಮುಖಾಂತರ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ ಹಾಗೂ ಗುಲಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ ಇವರಿಗೆ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಬಿಡುಗಡೆ ಮಾಡಲು ಸರ್ಕಾರದ ಮಂಜೂರಾತಿ ನೀಡಿದೆ.

**ಷರತ್ತುಗಳು:-**

1. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಕಾಯ್ದೆ-1999 ಹಾಗೂ ನಿಯಮಗಳು-2000 ಅನ್ನು ಕಡ್ಡಾಯವಾಗಿ ಪಾಲಿಸುವುದು.
2. ಸಂಸ್ಥೆಯು ಸಲ್ಲಿಸುವ ದಾಖಲೆಗಳನ್ವಯ ಸಮಂಜಸವಾಗಿರುವ ದರದಲ್ಲಿ ಸೇವೆ/ ಸರಕುಗಳನ್ನು ಖರೀದಿಸಿರುವ ಬಗ್ಗೆ ಮಾಹಿತಿ ಆಧರಿಸಿ ಅನುದಾನ ಬಿಡುಗಡೆ ಮಾಡುವುದು.
3. ಯಾವ ಉದ್ದೇಶಕ್ಕಾಗಿ ಅನುದಾನ ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕೆ ಅನುದಾನವನ್ನು ಬಳಸತಕ್ಕದು.
4. ವೆಚ್ಚವಾದ ಅನುದಾನದ ಕುರಿತು ಲೆಕ್ಕಪರಿಶೋಧಕರಿಂದ ಆಡಿಟ್ ವರದಿ ಮಾಡಿಸಲು ಅಗತ್ಯ ಕ್ರಮ ಕೈಗೊಳತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಹಿಂಬರಹ ಸಂಖ್ಯೆ:ಆಇ 432/ವೆಚ್ಚ-7/2024, ದಿನಾಂಕ:23.09.2024 ಮತ್ತು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 05 ಟಿಎಫ್‌ಪಿ 2024, ದಿನಾಂಕ:07.10.2024ರಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

S. Geetha 22/10/2024

(ಎಸ್.ಗೀತಾಬಾಯಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಕನ್ನಡ ಮತ್ತು ಸಂಸ್ಕೃತಿ ಇಲಾಖೆ(ಸಂಸ್ಕೃತಿ)

**ಇವರಿಗೆ:-**

1. ಮಹಾಲೇಖಪಾಲರು, (ಎ & ಇ), (ಜಿ&ಎಸ್ ಎಸ್ ಎ), (ಇ &ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.
2. ಆಯುಕ್ತರು, ಖಜಾನೆ ಆಯುಕ್ತಾಲಯ, ಕೆ.ಪಿ.ಸಿ.ಎಲ್, 6ನೇ ಮಹಡಿ, ಔಷಧ ನಿಯಂತ್ರಣ ಕಚೇರಿ, ಪ್ಯಾಲೇಸ್ ರಸ್ತೆ, ಬೆಂಗಳೂರು.
3. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ವಿಶ್ವೇಶ್ವರಯ್ಯ ಗೋಪುರ, ಬೆಂಗಳೂರು.
4. ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಭವನ, ಬೆಂಗಳೂರು.
5. ಸಂಬಂಧಪಟ್ಟವರಿಗೆ(ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಮುಖಾಂತರ)
6. ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಮತ್ತು ಕನ್ನಡ ಮತ್ತು ಸಂಸ್ಕೃತಿ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
7. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-7/ಗಣಕ ಕೋಶ), ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವಿಕಾಸಸೌಧ, ಬೆಂಗಳೂರು.
9. ಸರ್ಕಾರದ ಅಪರ ಕಾರ್ಯದರ್ಶಿಯವರ ಆಪ್ತ ಶಾಖೆ, ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆ, ವಿಕಾಸಸೌಧ, ಬೆಂಗಳೂರು.
10. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.